ಆನ್ ಲೈನ್ ಮೂಲಕ ಪಡಿತರ ಚೀಟಿ ವಿತರಣೆ

209 (500) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್):–ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ 'ಆನ್‌ಲೈನ್' ಮೂಲಕ ಪಡಿತರ ಚೀಟಿ ಪಡೆಯುವ ಸೌಲಭ್ಯ ಒದಗಿಸಲಾಗಿದೆಯೇ;

ಆ) ಈ ಪಡಿತರ ಚೀಟಿ ಇಲ್ಲದವರು ಯಾವ ಯಾವ ದಾಖಲೆಗಳನ್ನು 'ಆನ್‌ಲೈನ್' ಮೂಲಕ ಸಲ್ಲಿಸಬೇಕು.

ಇ) ಇವುಗಳನ್ನು ಸ್ಕ್ಯಾನ್ ಮಾಡಿ ಕಳುಹಿಸಲು ಎಷ್ಟು ವೆಚ್ಚವಾಗುತ್ತದೆ;

ಈ) ಎ.ಪಿ.ಎಲ್. ಕಾರ್ಡ್ ಪಡೆಯುವುದರಿಂದ ಆಗುವ ಪ್ರಯೋಜನಗಳೇನು ಹಾಗೂ ಬೆಂಗಳೂರಿನಲ್ಲಿರುವ ಅಕ್ರಮ ಪಡಿತರ ಚೀಟಿಗಳೇಷ್ಟು;

ಉ) ಆಧಾರ್ ಕಾರ್ಡ್ ಚಾಲನೆಯಲ್ಲಿರುವುದರಿಂದ, ಕೇವಲ ಗುರುತಿನ ಚೀಟಿಗಾಗಿ ಈ ಪಡಿತರ ಚೀಟಿ ಪಡೆಯುವ ಅಗತ್ಯತೆ ಇದೆಯೇ;

ಊ) ಈ ಆನ್‌ಲೈನ್ ಸೌಲಭ್ಯವನ್ನು ರದ್ದುಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ?

ಶೋಭಾ ಕರಂದ್ಲಾಜೆ (ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರು):–

ಅ) ಪಡಿತರ ಚೀಟಿಗಾಗಿ 'ಆನ್‌ಲೈನ್; ಮೂಲಕ ಅರ್ಜಿ ಸಲ್ಲಿಸುವ ಸೌಲಭ್ಯ ಒದಗಿಸಲಾಗಿದೆ.

ಆ) ಯಾವ ದಾಖಲೆಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ. ಮಾಹಿತಿಯನ್ನು ಮಾತ್ರ ಸಲ್ಲಿಸಿದರೆ ಸಾಕು.

ಇ) ಉದ್ಭವಿಸುವುದಿಲ್ಲ

ಈ) ಎಪಿಎಲ್ ಕಾರ್ಡ್ ಹೊಂದಿರುವವರು ಪಡಿತರ ಧಾನ್ಯಗಳು, ಸೀಮೆಎಣ್ಣೆ ಮತ್ತು ಪಿ.ಡಿ.ಎಸ್. ಅಡಿಗೆ ಅನಿಲ ಸಂಪರ್ಕ ಪಡೆಯಲು ಅರ್ಹರಾಗುತ್ತಾರೆ. ಬೆಂಗಳೂರಿನಲ್ಲಿ ಎಷ್ಟು ಅಕ್ರಮ ಪಡಿತರ ಚೀಟಿಗಳಿವೆ ಎಂದು ಮಾಹಿತಿ ಇರುವುದಿಲ್ಲ. ಆದರೆ ಕಳೆದ ಕೆಲವು ತಿಂಗಳಲ್ಲಿ ಸುಮಾರು 3,34,800 ಅನರ್ಹ ಪಡಿತರ ಚೀಟಿಗಳನ್ನು ಗುರುತಿಸಿ ರದ್ದು ಪಡಿಸಲಾಗಿದೆ.

ಊ) ಪಡಿತರ ಚೀಟಿಗಳನ್ನು ಪಡಿತರ ವ್ಯವಸ್ಥೆಯಲ್ಲಿ ಉಪಯೋಗಕ್ಕಾಗಿ ಮಾತ್ರ ನೀಡಲಾಗುತ್ತದೆ. ಗುರುತಿನ ಚೀಟಿಯನ್ನಾಗಿ ಉಪಯೋಗಿಸುವುದು ನಿಯಮ ಬಾಹಿರ.

ಊ) ಸದರಿ ವ್ಯವಸ್ಥೆ ಉತ್ತಮವಾಗಿ ನಡೆಯುತ್ತಿರುವುದರಿಂದ ರದ್ದುಗೊಳಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಸಮುದಾಯ ಭವನ ನಿರ್ಮಾಣ

211 (203) ಶ್ರೀ ರಾಮಸ್ವಾಮಿಗೌಡ, ಬಿ. ಬಿ. (ಕುಣಿಗಲ್):–ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕುಣಿಗಲ್ ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿರುವ ಪರಿಶಿಷ್ಟ ಜನಾಂಗದ ಕಾಲೋನಿಗಳಲ್ಲಿ 'ಸಮುದಾಯ ಭವನ'ಗಳ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಪರಿಶಿಷ್ಟ ಜನಾಂಗ ವಾಸಿಸುತ್ತಿರುವ ಪ್ರದೇಶಗಳಲ್ಲಿ ಈ ಭವನಗಳನ್ನು ನಿರ್ಮಾಣ ಮಾಡಲು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಶ್ರೀ ಎ. ನಾರಾಯಣಸ್ವಾಮಿ (ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು):–

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಮೂಲಭೂತ ಸೌಕರ್ಯಗಳಿಗೆ ಅನುದಾನ

212 (204) ಶ್ರೀ ರಾಮಸ್ವಾಮಿ ಗೌಡ, ಬಿ. ಬಿ. (ಕುಣಿಗಲ್):–ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕುಣಿಗಲ್ ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲಿರುವ ಪರಿಶಿಷ್ಟ ಜನಾಂಗದ ಕಾಲೋನಿಗಳಲ್ಲಿ ಕನಿಷ್ಟ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಪರಿಶಿಷ್ಟ ಜನಾಂಗ ವಾಸಸಿಸುತ್ತಿರುವ ಪ್ರದೇಶಗಳಲ್ಲಿ ಈ ಕನಿಷ್ಟ